ನಾನು ಅತ್ಯಧಿಕ ಮದಿ (ಸ್ಖಲನಪೂರ್ವ ದ್ರವ) ಸ್ರವಿಸುವ ವ್ಯಕ್ತಿಯಾಗಿದ್ದೆ. ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮಗಳಿಗಿರುವ ಸ್ಥಾನಮಾನದಿಂದ ನಾನು ಅವರಲ್ಲಿ ಅದರ ಬಗ್ಗೆ ಕೇಳಲು ಸಂಕೋಚಪಡುತ್ತಿದ್ದೆ. ಆದ್ದರಿಂದ, ನಾನು ಮಿಕ್ದಾದ್ ಬಿನ್ ಅಸ್ವದ್ ರಿಗೆ ಆಜ್ಞಾಪಿಸಿದೆ. ಅವರು (ಅದರ ಬಗ್ಗೆ) ಕೇಳಿದಾಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೀಗೆ ಉತ್ತರಿಸಿದರು: ಅವರು ತಮ್ಮ ಜನನಾಂಗವನ್ನು ತೊಳೆದು ವುದೂ (ಅಂಗಸ್ನಾನ) ನಿರ್ವಹಿಸಲಿ

ಅಲಿ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: "ನಾನು ಅತ್ಯಧಿಕ ಮದಿ (ಸ್ಖಲನಪೂರ್ವ ದ್ರವ) ಸ್ರವಿಸುವ ವ್ಯಕ್ತಿಯಾಗಿದ್ದೆ. ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮಗಳಿಗಿರುವ ಸ್ಥಾನಮಾನದಿಂದ ನಾನು ಅವರಲ್ಲಿ ಅದರ ಬಗ್ಗೆ ಕೇಳಲು ಸಂಕೋಚಪಡುತ್ತಿದ್ದೆ. ಆದ್ದರಿಂದ, ನಾನು ಮಿಕ್ದಾದ್ ಬಿನ್ ಅಸ್ವದ್ ರಿಗೆ ಆಜ್ಞಾಪಿಸಿದೆ. ಅವರು
(ಅದರ ಬಗ್ಗೆ) ಕೇಳಿದಾಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೀಗೆ ಉತ್ತರಿಸಿದರು: ಅವರು ತಮ್ಮ ಜನನಾಂಗವನ್ನು ತೊಳೆದು ವುದೂ (ಅಂಗಸ್ನಾನ) ನಿರ್ವಹಿಸಲಿ." ಬುಖಾರಿಯಲ್ಲಿರುವ ವರದಿಯಲ್ಲಿ ಹೀಗಿದೆ: "ಅವರು ಉತ್ತರಿಸಿದರು: ನೀವು ವುದೂ ನಿರ್ವಹಿಸಿರಿ
ಮತ್ತು ನಿಮ್ಮ ಜನನಾಂಗವನ್ನು ತೊಳೆಯಿರಿ." [صحيح] [متفق عليه]

ಅಲಿ ಬಿನ್ ಅಬೂತಾಲಿಬ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರವರು ಇಲ್ಲಿ ತಿಳಿಸುವುದೇನೆಂದರೆ, ಅವರು ಅತ್ಯಧಿಕ ಮದಿ (ಕಾಮೋದ್ರೇಕವಾಗುವಾಗ ಅಥವಾ ಸ್ಖಲನಕ್ಕೆ ಮೊದಲು ಹೊರಬರುವ ತೆಳುವಾದ, ಜಿಗುಟಾದ ಬಿಳಿ ದ್ರವ) ಸ್ರವಿಸುವ ವ್ಯಕ್ತಿಯಾಗಿದ್ದೆ. ಅದು ಸ್ರವಿಸುವಾಗ ಏನು ಮಾಡಬೇಕೆಂದು ಅವರಿಗೆ ತಿಳಿದಿರಲಿಲ್ಲ. ಅವರು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮಗಳು ಫಾತಿಮರ ಗಂಡನಾಗಿರುವುದರಿಂದ ಅದರ ಬಗ್ಗೆ ಪ್ರವಾದಿಯವರೊಡನೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕೇಳಲು ಸಂಕೋಚಪಡುತ್ತಿದ್ದರು. ಆದ್ದರಿಂದ ಅದರ ಬಗ್ಗೆ ಪ್ರವಾದಿಯವರೊಡನೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕೇಳಲು ಅವರು ಮಿಕ್ದಾದ್ ಬಿನ್ ಅಸ್ವದ್ ರಲ್ಲಿ ವಿನಂತಿಸಿದರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಜನನಾಂಗವನ್ನು ತೊಳೆದು ನಂತರ ವುದೂ ನಿರ್ವಹಿಸಬೇಕೆಂದು ಉತ್ತರಿಸಿದರು.

http://www.sunnah.global/hadeeth/kn/show/3348